ಕರ್ನಾಟಕ ಸರ್ಕಾರ

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.2200/2022**

ಪಿ.ಡಬ್ಲ್ಯೂಃ **19**

ಸಿ.ಡಬ್ಲ್ಯೂ**:**9

| | | |
|---|---|---|
| ಹೆಸರು | ಃ | ಬಿ ಎಲ್ ಸುರೇಶ್ |
| ತಂದೆಯ **ಹೆಸರು** | ಃ | ಲೇಟ್ ಬಿ ಜಿ ಲಕ್ಷ್ಮಣಗೌಡ |
| ವಯಸ್ಸು | ಃ | 52 ವರ್ಷ |
| ಉದ್ಯೋಗ | ಃ | ಮುಖ್ಯ ಪೇದೆ 218 |
| ವಾಸಸ್ಥಳ | ಃ | ಲಕ್ಕವಳ್ಳಿ |

**ದಿನಾಂಕಃ 02.04.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಸ.ಸ.ಅ. ರವರಿಂದ.**

**2021** ರಿಂದ ಇಲ್ಲಿಯತನಕ ನಾನು ಲಕ್ಕವಳ್ಳಿ **ಪೋಲೀಸ್ ಠಾಣೆಯಲ್ಲಿ** ಮುಖ್ಯ ಪೇದೆಯಾಗಿ **ಆಗಿ ಕರ್ತವ್ಯ** ನಿರ್ವಹಿಸುತ್ತಿದ್ದೇನೆ.

ದಿನಾಂಕಃ 18.05.2022 ರಂದು ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವಿಕರಿಸಿಕೊಂಡು 1-15 ಗಂಟೆ ಸಮಯದಲ್ಲಿ ಠಾಣಾ ಮೊಕದ್ದಮೆ ಸಂಖ್ಯೆಃ 39/2022 ರಂತೆ ಪ್ರಕರಣವನ್ನು ಐ.ಪಿ.ಸಿ. ಕಲಂ 279, 337 ರಡಿಯಲ್ಲಿ ದಾಖಲು ಮಾಡಿರುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ತಯಾರು ಮಾಡಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ದಿನಾಂಕ 19.05.2022 ರಂದು 11-00 ಗಂಟೆ ಸಮಯಕ್ಕೆ ಕೃತ್ಯ ನೆಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ-9 ಮತ್ತು 10 ರವರನ್ನು ಪಂಚರಾಗಿ ಕರೆದುಕೊಂಡು ಅವರ ಸಮಕ್ಷಮ ಕೃತ್ಯ ಸ್ಥಳದಲ್ಲಿ ಮಹಜರ್ ಕ್ರಮವನ್ನು ಜರುಗಿಸಿ ಕಚ್ಚಾ ನಕ್ಷೆಯನ್ನು ತಯಾರಿಸಿ ಛಾಯಚಿತ್ರವನ್ನು ತೆಗೆಸಿರುತ್ತೇನೆ.

ದಿನಾಂಕ 20.05.2022 ರಂದು ಅಪಘಾತ ಮಾಡಿದ ವಾಹನ ಕೆ ಎ 14-ಇ ಯು 3503 ಸ್ಪ್ಲೆಂಡರ್ ಬೈಕ್ ಅನ್ನು ಠಾಣಾ ಅವರಣದಲ್ಲಿ ಪಂಚರಾದ ಚಾಸಾ-11 ಮತ್ತು 12 ರವರ

ಸಮಕ್ಷಮ ವಾಹನ ಅಮಾನತು ಮಹಜರ್ ಕ್ರಮವನ್ನು ಜರುಗಿಸಿ ವಾಹನವನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ. ಛಾಯಾಚಿತ್ರವನ್ನು ತೆಗೆಸಿರುತ್ತೇನೆ.

ಮುಂದಿನ ಕ್ರಮಕ್ಕಾಗಿ ಕೇಸಿನ ಕಡತವನ್ನು ಚಾಸಾ-20 ರವರಿಗೆ ವಹಿಸಿಕೊಟ್ಟಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ದೂರು ಆಗಿದ್ದು, ಸದರಿ ದಾಖಲೆಯು ಈಗಾಗಲೆ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಪ್ರಥಮ ವರ್ತಮಾನ ವರದಿಯಾಗಿದ್ದು, ಸದರಿ ದಾಖಲೆಯನ್ನು ನಿಪಿ12 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ವರದಿಯಾಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು.

ನಿಪಿ-4 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ವಾಹನ ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-9 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-9(ಸಿ) ಎಂದು ಗುರುತಿಸಲಾಯಿತು.

ನಿಪಿ-10 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು : ಆರೋಪಿತರ ಪರ ಶ್ರೀ ಜೆ ಟಿ ಜೆ ವಕೀಲರಿಂದ.**

ನಾನು ಚಾಸಾ-1 ರವರು ನೀಡಿದ ಒಂದು ದೂರನ್ನು ಸ್ವೀಕರಿಸಿಕೊಂಡಿರುತ್ತೇನೆ. ಕೃತ್ಯ ನೆಡೆದು 2 ದಿನದ ನಂತರ ಚಾಸಾ-1 ರವರು ದೂರನ್ನು ನೀಡಿರುತ್ತಾರೆ ಎಂದರೆ ಸರಿ . ಸ್ಥಳ ಮಹಜರ್ ಮಾಡಿದ ಸ್ಥಳದಲ್ಲಿನ ಜಿಬ್ರಾ ಕ್ರಾಸ್ ಹತ್ತಿರ ಯಾವುದೇ ಸಿಗ್ನಲ್ ಇರಲಿಲ್ಲ ಹಾಗೂ ಸದರಿ ದಿನದಂದು ಸಂತೆ ಇದ್ದ ಕಾರಣ ಯಾವುದೇ ಪೊಲೀಸ್ ಅನ್ನು ಅಲ್ಲಿ

ನಿಯೋಜಿಸಿರಲಿಲ್ಲ ಎಂದರೆ ಸರಿ. ರಸ್ತೆಯ ಪೂರ್ಣ ಎಡಭಾಗದಲ್ಲಿ ಘಟನೆ ಸಂಭವಿಸಿರುತ್ತದೆ ಎಂದರೆ ಸರಿ. ಅಪಘಾತ ನಡೆದ ಸ್ಥಳದಲ್ಲಿ ಅಪಘಾತವಾದ ಬಗ್ಗೆ ಯಾವುದೇ ಸುಳಿವು ಸಿಕ್ಕಿರುವುದಿಲ್ಲ ಎಂದರೆ ಸರಿ. ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ಆರೋಪಿಯ ಮೇಲೆ ಸುಳ್ಳು ಪ್ರಥಮ ವರ್ತಮಾನ ಸೃಷ್ಟಿ ಮಾಡಿದ್ದೀರಾ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ. ರವರು, ತರೀಕೆರೆ.**